ಮೂಲಕ ನಾವು ಸಾಕಷ್ಟು ನೀರನ್ನು ಕೊಡಲಿಕ್ಕೆ ಆಗದಿದ್ದರೆ ಮಿನಿ ವಾಟರ್ ಸಪ್ಲೆಯಿಂದ ಆದಕ್ಕೂ ಒಂದು ಸೋರ್ಸ್ ಹುಡುಕಬೇಕಾಗುತ್ತದೆ. ಅಲ್ಲಿಂದ ನಾವು ನೀರನ್ನು ತರಬೇಕಾಗುತ್ತದೆ. ಒಟ್ಟಿನಲ್ಲಿ ನೀರಿನ ತೊಂದರೆ ಎಲ್ಲಿದೆ, ಅದನ್ನು ನಿವಾರಣೆ ಮಾಡುವುದಕ್ಕೆ ಏನು ಮಾಡಲಿಕ್ಕೆ ಸಾಧ್ಯವೋ ಅದನ್ನು ಮಾಡೋಣ.

ಗ್ರಾಮ ಪಂಚಾಯಿತಿಗಳಿಗೆ ಅಧ್ಯಕ್ಷರು ಹಾಗೂ ಉಪಾಧ್ಯಕ್ಷರುಗಳ ಆಯ್ಕೆ

316 - ಶ್ರೀ ಪಿ. ಬಸವರಾಜ್ (ಬ್ರಹ್ಮಾವರ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

(ಅ) ರಾಜ್ಯದಲ್ಲಿ ಬಹುಪಾಲು ಗ್ರಾಮ ಪಂಚಾಯಿತಿ ಚುನಾವಣೆಗಳು ಈಗಾಗಲೇ ಮುಗಿದು ಬಹುಕಾಲವಾಗಿದ್ದು ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಆಯ್ಕೆಯಾಗದೇ ಇರುವುದು ನಿಜವಲ್ಲವೆ, ಈ ವಿಳಂಬಕ್ಕೆ ವಿವರಗಳನ್ನು ನೀಡುವುದು.

(ಆ) ವಿವಿಧ ಗ್ರಾಮ ಪಂಚಾಯಿತಿ ಅಧ್ಯಕ್ಷರ ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಮೀಸಲಾತಿ ರೋಸ್ಟರ್ ಬಿಂದುಗಳನ್ನು ಗುರುತಿಸುವಲ್ಲಿ ಸರ್ಕಾರದ ಸಂಬಂಧಿಸಿದ ಶಾಸಕರ ಸಲಹೆ ಪಡೆಯಬಹುದೇ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಸಚಿವರು) :

ಅ) ಗ್ರಾಮ ಪಂಚಾಯಿತಿ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಹುದ್ದೆಗಳಿಗೆ ಚುನಾವಣೆ ನಡೆಸಲು ಮೀಸಲಾತಿ ವಿಧಾನಗಳನ್ನು ರೂಪಿಸಿ ಸರ್ಕಾರ ದಿನಾಂಕ 21.12.1993ರಂದು ಹೊರಡಿಸಲಾದ ಆದೇಶವನ್ನು ಕಾರ್ಯಗತಗೊಳಿಸುವಲ್ಲಿ ಕೆಲವೊಂದು ತೊಂದರೆಗಳಿದ್ದುದರಿಂದ ಚುನಾವಣೆ ನಡೆಸಲು ಆಗಲಿಲ್ಲ. ಈ ತೊಂದರೆಗಳ ನಿವಾರಣೆಗಾಗಿ ಪರಿಷ್ಕೃತ ಆದೇಶ ದಿನಾಂಕ 2.2.1994ರಂದು ಹೊರಡಿಸಲಾಗಿದೆ. ಇದರಂತೆ ದಿನಾಂಕ 1.3.94ರೊಳಗೆ ಚುನಾವಣೆಗಳನ್ನು ನಡೆಸಲು ನಿರ್ದೇಶನ ಈಗಾಗಲೇ ನೀಡಲಾಗಿದೆ.

(ಆ) ದಿನಾಂಕ 2.2.1994ರಂದು ಹೊರಡಿಸಲಾದ ಮಾರ್ಗಸೂಚಿಗಳನುಸಾರ ವಿವಿಧ ವರ್ಗಗಳಿಗೆ ಅಧ್ಯಕ್ಷ ಮತ್ತು ಉಪಾಧ್ಯಕ್ಷರ ಸ್ಥಾನಗಳಿಗೆ ಮೀಸಲಾತಿಯು ಆ ತಾಲ್ಲೂಕಿನಲ್ಲಿಯ ಗ್ರಾಮ ಪಂಚಾಯಿತಿಯಲ್ಲಿ ವಿವಿಧ ವರ್ಗಗಳಿಂದ ಚುನಾಯಿತರಾದ ಸದಸ್ಯರ ಸಂಖ್ಯೆಯನ್ನು ಅವಲಂಬಿಸಿರುತ್ತದೆ. ಆದಾಗ್ಯೂ ಒಂದೇ ವರ್ಗಕ್ಕೆ ಸೇರಿದ ಚುನಾಯಿತ ಸದಸ್ಯರ ಸಂಖ್ಯೆಯು ಒಂದಕ್ಕಿಂತ ಹೆಚ್ಚಿನ ಗ್ರಾಮ ಪಂಚಾಯಿತಿಯಲ್ಲಿ ಇದ್ದ ಪಕ್ಷದಲ್ಲಿ ಜಿಲ್ಲಾಧಿಕಾರಿಯವರು ತಮ್ಮ ವಿವೇಚಾನುಸಾರ ನಿರ್ಧರಿಸುವರು. ಹಾಗೂ ಒಂದೇ ವರ್ಗಕ್ಕೆ ಸೇರಿದ ಸದಸ್ಯರುಗಳು ಅಧ್ಯಕ್ಷ ಮತ್ತು ಉಪಾಧ್ಯಕ್ಷ ಸ್ಥಾನಗಳಿಗೆ ಗುಂಪಾಗುವುದನ್ನು ತಪ್ಪಿಸಲು ಪ್ರಯತ್ನಿಸುವರು. ಸಂಬಂಧಪಟ್ಟವರೆಲ್ಲರ ಸಲಹೆ ಪಡೆಯುವರು ಅಥವಾ ಸರಿ ಎಂದು ಕಂಡುಬಂದಲ್ಲಿ ಲಾಟರಿ ಎತ್ತುವ ಮೂಲಕ ನಿರ್ಧರಿಸುವರು.

ಶ್ರೀ ಪಿ. ಬಸವರಾಜ್ : ಮಾನ್ಯ ಅಧ್ಯಕ್ಷರೆ, ಉಪ ಪ್ರಶ್ನೆ ಇಲ್ಲ.

ಗ್ರಾಮೀಣ ಪ್ರದೇಶಗಳಲ್ಲಿ ಶೌಚಾಲಯಗಳ ನಿರ್ಮಾಣ

387 - ಶ್ರೀ ಶಿವಾನಂದ ಎಚ್. ಕೌಜಲಗಿ (ಬೈಲಹೊಂಗಲ) : ಮಾನ್ಯ ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರು. ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣ ಪ್ರದೇಶಗಳಲ್ಲಿ ಶೌಚಾಲಯಗಳು ಇಲ್ಲದೇ ಇರುವುದರಿಂದ ಹಳ್ಳಿಯ ಜನರಿಗೆ ತೊಂದರೆಯಾಗುತ್ತಿರುವ ಸಂಗತಿ ಸರಕಾರದ ಗಮನಕ್ಕೆ ಬಂದಿದೆಯೇ?